ಸಿ.ಸಿ. ನಂಬರಃ 1562/2024

**ಪಿ.ಡಬ್ಲ್ಯೂಃ 1**

**ಸತ್ಯ ಪ್ರತಿಜ್ಞೆಯ ಮೇರೆಗೆ, ತಾಃ 12-02-2026**

**ಮುಖ್ಯ ವಿಚಾರಣೆಃ ಫಿರ್ಯಾದುದಾರರ ಪರ ಶ್ರೀ ಎಸ್.ಎಲ್.ಡಿ. ವಕೀಲರಿಂದ,**

ನನ್ನ ಮುಖ್ಯ ವಿಚಾರಣೆ ಪ್ರಮಾಣಪತ್ರದಲ್ಲಿ ಬರೆದ ಎಲ್ಲಾ ವಿಷಯಗಳು ನಿಜ ಇರುತ್ತವೆ. ಅದಕ್ಕೆ ನಾನು ಸಹಿ ಮಾಡಿರುತ್ತೇನೆ ಮತ್ತು ಈ ಕೆಳಕಂಡ ದಾಖಲೆಗಳನ್ನು ನೋಡಿ ಗುರುತಿಸುತ್ತೇನೆ.

2. ನನಗೆ ಈ ಪ್ರಕರಣವನ್ನು ನಡೆಸಲು ಫಿರ್ಯಾದಿ ಸೊಸೈಟಿಯವರು ಅಧಿಕಾರ ನೀಡಿರುವುದಕ್ಕೆ ಸಂಬಂಧಿಸಿದಂತೆ ಅಧಿಕಾರ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ನನ್ನ ಹಿಂದಿನ ಅಧಿಕಾರಿಗೆ ದೂರು ದಾಖಲು ಮಾಡಲು ನೀಡಿದ ಅಧಿಕಾರ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ಆರೋಪಿ ಕೊಟ್ಟ ಫೆಡರಲ್ ಬ್ಯಾಂಕಿನ ಚೆಕ್ ಸಂಖ್ಯೆ: 111651 ನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, ಚೆಕ್‌ನಲ್ಲಿರುವ ಆರೋಪಿಯ ಸಹಿಯನ್ನು ನಿಪಿ-3(ಎ) ಎಂದು, ಬ್ಯಾಂಕಿನ ಹಿಂಬರಹವನ್ನು ನಿಪಿ-4 ಎಂದು, ಆರೋಪಿಗೆ ವಕೀಲರ ಮೂಲಕ ಕೊಟ್ಟ ನೋಟೀಸಿನ ಪ್ರತಿಯನ್ನು ಹಾಜರುಪಡಿಸಿದ್ದು ನಿಪಿ-5 ಎಂದು, ಅಂಚೆ ರಶೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-6 ಎಂದು, ಆರೋಪಿ ಕಳುಹಿಸಿದ ನೋಟಿಸು ಆತ ಸ್ವೀಕರಿಸದೇ ವಾಪಸ್ಸು ಬಂದಿರುವ ಅಂಚೆ ಲಕೋಟೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-7 ಎಂದು, ಸದ್ರಿ ಅಂಚೆ ಲಕೋಟೆಯನ್ನು ತೆರೆದ ನ್ಯಾಯಾಲಯದಲ್ಲಿ ತೆರೆದು ನೋಡಿ ಅದನ್ನು ನಿಪಿ-7(ಎ) ಎಂದು, ಸಾಲದ ಅರ್ಜಿಯ ನಕಲನ್ನು ಹಾಜರುಪಡಿಸಿದ್ದು ಅದನ್ನು ಮೂಲ ದಾಖಲೆಯೊಂದಿಗೆ ತಾಳೆ ನೋಡಿ ಅದನ್ನು ನಿಪಿ-8 ಎಂದು, ಸಾಲದ ಮಂಜೂರಾತಿ ಆದೇಶದ ನಕಲನ್ನು ಹಾಜರುಪಡಿಸಿದ್ದು ಅದನ್ನು ಮೂಲ ದಾಖಲೆಯೊಂದಿಗೆ ತಾಳೆ ನೋಡಿ ಅದನ್ನು ನಿಪಿ-9 ಎಂದು, ಸಾಲದ ಖಾತೆಯ ಸ್ಟೇಟ್‌ಮೆಂಟನ್ನು ಹಾಜರುಪಡಿಸಿದ್ದು ಅದನ್ನು ನಿಪಿ-10 ಎಂದು ಗುರುತಿಸಲಾಯಿತು.

**(ನಿಪಿ-8 ಮತ್ತು 9 ರ ಮೂಲ ದಾಖಲೆಗಳನ್ನು ಅವಶ್ಯಕತೆ ಇದ್ದಾಗ ಹಾಜರುಪಡಿಸಬೇಕೆಂಬ ಷರತ್ತಿಗೆ ಒಳಪಟ್ಟು ಸಾಕ್ಷಿಗೆ ವಾಪಸ್ಸು ನೀಡಲಾಯಿತು.)**

**ಪಾಟೀ ಸವಾಲಿಗೆ ಆರೋಪಿ ಪರ ವಕೀಲರು ಕಾಲಾವಕಾಶ ಕೋರಿದ್ದರಿಂದ ಮುಂದೂಡಲಾಯಿತು.**

**(ನನ್ನ ಹೇಳಿಕೆ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**ಸಹಿ ಇದೆ.**

**ಹೆಚ್ಚುವರಿ ನ್ಯಾ.ದಂ., ಭಟ್ಕಳ.**